# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ: ತುವಿ:ಶೈವಿ:2026-27: 1213 ದಿನಾಂಕ: 04.07.2026

## ಸುತ್ತೋಲೆ

**ವಿಷಯ :** ರೆಡ್ ರಿಬ್ಬನ್ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಉಲ್ಲೇಖ :** ಸಂಖ್ಯೆ : ಜಿಏನಿಘ/ತು/25/2025-26 ದಿನಾಂಕ:30.06.2026

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳು, ತುಮಕೂರು ಇವರು ಯುವ ಜನರಲ್ಲಿ ಹೆಚ್.ಐ.ವಿ. / ಏಡ್ಸ್ ಬಗ್ಗೆ ಜಾಗೃತಿ ಮತ್ತು ತಡೆಕಟ್ಟುವ ಶಿಕ್ಷಣವನ್ನು ಬಲಪಡಿಸುವ ಸಲುವಾಗಿ, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ, ಬೆಂಗಳೂರು ಇವರು ೦೮ ತಿಂಗಳ ಅವಧಿಗೆ ರೆಡ್ ರಿಬ್ಬನ್ ಜಾಗೃತಿ ಅಭಿಯಾನವನ್ನು ಆರಂಭಿಸಲು ಉದ್ದೇಶಿಸಿರುವ ಬಗ್ಗೆ ಹಾಗೂ ಸದರಿ ಅಭಿಯಾನದಡಿಯಲ್ಲಿ ಭೌತಿಕ ಜಾಗೃತಿ ಕಾರ್ಯಕ್ರಮ ಮತ್ತು ಡಿಜಿಟಲ್ ಸಂಪರ್ಕದ ಮೂಲಕ ಯುವ ಸಮೂಹವನ್ನು ತಲುಪುವುದು ಮತ್ತು ಆರೋಗ್ಯಕರ ಸ್ಪರ್ಧೆಯನ್ನು ವಿದ್ಯಾರ್ಥಿಗಳಲ್ಲಿ ಮೂಡಿಸುವ ಉದ್ದೇಶ ಹೊಂದಿರುವ ಬಗ್ಗೆ ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳ ಸಮನ್ವಯದೊಂದಿಗೆ ಮಾಸಿಕ ಚಟುವಟಿಕೆಗಳನ್ನು ತಮ್ಮ ಕಾಲೇಜುಗಳಲ್ಲಿ ನಡೆಸಿ ಕಾರ್ಯಕ್ರಮದ ವರದಿಯನ್ನು **ಮಾಸಿಕವಾಗಿ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳ ಕಛೇರಿ, ತುಮಕೂರು ಇಲ್ಲಿ ಈ-ಮೇಲ್ ಮೂಲಕ ಸಲ್ಲಿಸಲು** ಈ ಮೂಲಕ ತಿಳಿಸಿದೆ. ಈ ಸಂಬಂಧ ಹೆಚ್ಚಿನ ಮಾಹಿತಿಗಾಗಿ ಪತ್ರ ಲಗತ್ತಿಸಲಾಗಿದೆ.

ಉಪಕುಲಸಚಿವರು
ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

**ಅಡಕ:** 1. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತುಮಕೂರು &
2. ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು- ಇವರ ಪತ್ರಗಳು.

ಗೆ,

1. ಅಧ್ಯಕ್ಷರು/ಸಂಯೋಜಕರು ಸ್ನಾತಕೋತ್ತರ ಅಧ್ಯಯನ ಕೇಂದ್ರ ಮತ್ತು ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ಮೇಲ್ಕಂಡ ವಿಷಯದ ಕ್ರಮದ ಕುರಿತು ಮಾಹಿತಿಯನ್ನು ಸಿದ್ಧಪಡಿಸಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು-ಮೇಲ್ಕಂಡ ವಿಷಯದ ಕ್ರಮದ ಕುರಿತು ಮಾಹಿತಿಯನ್ನು ಸಿದ್ಧಪಡಿಸಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸಂಯೋಜಿತ ಕಾಲೇಜುಗಳು (ಸ್ನಾತಕ ಮತ್ತು ಸ್ನಾತಕೋತ್ತರ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಪ್ರತಿಗಳು:**

1. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.-ಇ-ಮೇಲ್ ಮೂಲಕ ಕಳುಹಿಸುವುದು.
2. ಕಛೇರಿ ಪ್ರತಿ.

KSAPS NACO

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,**
**ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ, ತುಮಕೂರು.**

ಜಿಲ್ಲಾ ಕ್ಷಯ ರೋಗ ನಿಯಂತ್ರಣ ಕೇಂದ್ರದ ಆವರಣ, ಜಿಲ್ಲಾಧಿಕಾರಿಗಳ ಕಛೇರಿ ಹಿಂಭಾಗ, ತುಮಕೂರು –572 101.
ಕಛೇರಿ ದೂರವಾಣಿ ಸಂಖ್ಯೆ: 0816-2956550/9449847014 ಇ ಮೇಲ್ಐ.ಡಿ:dapcutmk1@gmail.com

ಸಂಖ್ಯೆ: ಜಿಏನಿಘ/ತು/25/2025–26 ದಿನಾಂಕ : 30–6–2026

ರವರಿಗೆ,

ರಿಜಿಸ್ಟ್ರಾರ್,

ತುಮಕೂರು ವಿಶ್ವವಿದ್ಯಾನಿಲಯ

ತುಮಕೂರು.

ಮಾನ್ಯರೆ,

ವಿಷಯ: ರೆಡ್ ರಿಬ್ಬನ್ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ತುಮಕೂರು ವಿಶ್ವವಿದ್ಯಾನಿಲಯದಡಿಯಲ್ಲಿ ಬರುವ ಎಲ್ಲಾ ಯು.ಜಿ ಮತ್ತು ಪಿಜಿ ಕಾಲೇಜುಗಳ ಪಟ್ಟಿಯನ್ನು ನೀಡಲು ಕೋರಿ.

ಉಲ್ಲೇಖ: ಕರ್ನಾಟಕ ಸರ್ಕಾರ ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರದ ಸಂಖ್ಯೆ ಕಾಶಿಇ/03/ಸುತ್ತೋಲೆ/ಶೈವಿ/2024–25 ದಿನಾಂಕ: 19–6–2026.

***********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಯುವ ಜನರಲ್ಲಿ ಹೆಚ್.ಐ.ವಿ/ಏಡ್ಸ್ ಬಗ್ಗೆ ಜಾಗೃತಿ ಮತ್ತು ತಡೆಗಟ್ಟುವ ಶಿಕ್ಷಣವನ್ನು ಬಲಪಡಿಸುವ ಸಲುವಾಗಿ, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ ಬೆಂಗಳೂರು ಇವರು 8 ತಿಂಗಳ ಅವಧಿಗೆ ರೆಡ್ ರಿಬ್ಬನ್ ಜಾಗೃತಿ ಅಭಿಯಾನವನ್ನು ಆರಂಭಿಸಲು ಉದ್ದೇಶಿಸಲಾಗಿದೆ. ಸದರಿ ಅಭಿಯಾನದಡಿಯಲ್ಲಿ ಭೌತಿಕ ಜಾಗೃತಿ ಕಾರ್ಯಕ್ರಮ ಮತ್ತು ಡಿಜಿಟಲ್ ಸಂಪರ್ಕದ ಮೂಲಕ ಯುವ ಸಮೂಹವನ್ನು ತಲುಪುವುದು ಮತ್ತು ಆರೋಗ್ಯಕರ ಸ್ಪರ್ಧೆಯನ್ನು ವಿದ್ಯಾರ್ಥಿಗಳಲ್ಲಿ ಮೂಡಿಸು ಉದ್ದೇಶ ಹೊಂದಿರುತ್ತದೆ. ಸದರಿ ಅಭಿಯಾನವನ್ನು ಯಶಸ್ವಿಯಾಗಿ ನಡೆಸಲು ತುಮಕೂರು ವಿಶ್ವವಿದ್ಯಾನಿಲಯದಡಿಯಲ್ಲಿ ಬರುವ ಎಲ್ಲಾ ಕಾಲೇಜುಗಳ ವಿವರವನ್ನು ನೀಡುವಂತೆ ಕೋರಿದೆ.

ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳ ಸಮನ್ವಯದೊಂದಿಗೆ ಮಾಸಿಕ ಚಟುವಟಿಕೆಗಳನ್ನು ಎಲ್ಲಾ ಕಾಲೇಜುಗಳಲ್ಲಿ ನಡೆಸಲು ಪೂರ್ಣ ಸಹಕಾರವನ್ನು ನೀಡುವಂತೆ ಎಲ್ಲಾ ಕಾಲೇಜು ಪ್ರಾಂಶುಪಾಲರಿಗೆ ನಿರ್ದೇಶನ ನೀಡಿ, ಕಾರ್ಯಕ್ರಮದ ವರದಿಯನ್ನು ಮಾಸಿಕವಾಗಿ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳ ಕಛೇರಿ ತುಮಕೂರು ಇಲ್ಲಿಗೆ ಈ–ಮೇಲ್ ಮೂಲಕ ಸಲ್ಲಿಸಲು ಕೋರಿದೆ.

ವಂದನೆಗಳೊಂದಿಗೆ,

Chandana
04/07

ತಮ್ಮ ವಿಶ್ವಾಸಿ,

ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳು,
ತುಮಕೂರು.

ತುಮಕೂರು ವಿಶ್ವವಿದ್ಯಾನಿಲಯ 1571 2/7/26

https://breakfreeindia.org
1097
www.ksaps.karnataka.gov.in | KarSAPS

AC
1571
4/7/26

**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001
ದಿನಾಂಕ:19-06-2026

ಸಂಖ್ಯೆ:ಕಾಶಿಇ/03/ಸುತ್ತೋಲೆ/ಶೈವಿ/2024-25

## ಸುತ್ತೋಲೆ

ವಿಷಯ: ಸ್ಕೋರಿಂಗ್ ಮತ್ತು ರೀಚ್ ರಿಪೋರ್ಟಿಂಗ್‌ನೊಂದಿಗೆ 8 ತಿಂಗಳ ಕಾಲೇಜು ಮಟ್ಟದ ರೆಡ್ ರಿಬ್ಬನ್ ಜಾಗೃತಿ ಅಭಿಯಾನದ ಅನುಷ್ಠಾನ ಕುರಿತು.

ಉಲ್ಲೇಖ: ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಏಡ್ಸ್ ತಡೆಗಟ್ಟುವಿಕೆ ಸಂಘ ಬೆಂಗಳೂರು, ಇವರ ಪತ್ರ ಸಂಖ್ಯೆ:KSAPS/IEC/YOTH/1/2026-IEC, ದಿನಾಂಕ:21-05-2026.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಯುವಜನರಲ್ಲಿ HIV / AIDS ಬಗ್ಗೆ ಜಾಗೃತಿ ಮತ್ತು ತಡೆಗಟ್ಟುವ ಶಿಕ್ಷಣವನ್ನು ಬಲಪಡಿಸುವ ಸಲುವಾಗಿ, ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲಿ ರಾಜ್ಯಾದ್ಯಂತ **ರೆಡ್ ರಿಬ್ಬನ್ ಜಾಗೃತಿ** ಅಭಿಯಾನವನ್ನು ಜಾರಿಗೆ ತರಲು ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿಯು ಉದ್ದೇಶಿಸಿದ್ದು, ಈ ಸಂಬಂಧ ಎಂಟು ತಿಂಗಳ ಅವಧಿಗೆ ನಡೆಸಲಾಗುವ ರಚನಾತ್ಮಕ ಜಾಗೃತಿ ಚಟುವಟಿಕೆಗಳಲ್ಲಿ ಕಾಲೇಜುಗಳನ್ನು ಮತ್ತು ಯುವ ಗುಂಪುಗಳನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳುವುದು ಈ ಅಭಿಯಾನದ ಗುರಿಯಾಗಿದೆ. ಹಾಗೂ ಈ ಉಪಕ್ರಮದ ಪ್ರಾಥಮಿಕ ಉದ್ದೇಶವೆಂದರೆ ನೇರ (ಭೌತಿಕ) ಜಾಗೃತಿ ಕಾರ್ಯಕ್ರಮಗಳು ಮತ್ತು ಡಿಜಿಟಲ್ ಸಂಪರ್ಕ ಎರಡರ ಮೂಲಕ ಯುವ ಸಮೂಹವನ್ನು ತಲುಪುವುದು ಹಾಗೂ ಪಾರದರ್ಶಕ ಅಂಕ ಗಳಿಕೆಯ ವ್ಯವಸ್ಥೆಯ ಮೂಲಕ ಕಾಲೇಜುಗಳಲ್ಲಿ ಆರೋಗ್ಯಕರ ಸ್ಪರ್ಧೆಯನ್ನು ಪ್ರೋತ್ಸಾಹಿಸುವುದಾಗಿದೆ.

ಈ ನಿಟ್ಟಿನಲ್ಲಿ ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ, ಮಾಸಿಕ ಚಟುವಟಿಕೆಗಳ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳಲು ಹಾಗೂ ಅಭಿಯಾನವನ್ನು ಯಶಸ್ವಿಗೊಳಿಸಲು ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರಿಗೆ ಈ ಕೆಳಕಂಡಂತೆ ಸೂಚಿಸಲಾಗಿದೆ.

1. ಭೌತಿಕ ವ್ಯಾಪ್ತಿ (ನೇರವಾಗಿ ಭಾಗವಹಿಸುವ ವ್ಯಕ್ತಿಗಳ ಸಂಖ್ಯೆ) ಮತ್ತು ಡಿಜಿಟಲ್ ವ್ಯಾಪ್ತಿ (ಆನ್‌ಲೈನ್ ಪ್ಲಾಟ್‌ಫಾರ್ಮ್‌ಗಳ ಮೂಲಕ ತಲುಪಿದ ವ್ಯಕ್ತಿಗಳ ಸಂಖ್ಯೆ) ಕುರಿತು ವರದಿಗಳನ್ನು ಸಲ್ಲಿಸಬೇಕು. ಕಾಲೇಜುಗಳಲ್ಲಿ ಕೈಗೊಳ್ಳಬೇಕಾದ ಮಾಸಿಕ ಚಟುವಟಿಕೆಗಳನ್ನು ಅನುಬಂಧ -1 ರಲ್ಲಿ ಲಗತ್ತಿಸಲಾಗಿದೆ.
2. ಜಾಗೃತಿ ಅಭಿಯಾನವನ್ನು ನಡೆಸುವಲ್ಲಿ ಕಾಲೇಜು ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸುವುದನ್ನು ಖಚಿತಪಡಿಸಿಕೊಳ್ಳಲು ಮತ್ತು ಮಾಸಿಕ ವರದಿಗಳನ್ನು ಸಂಬಂಧಪಟ್ಟ ಜಿಲ್ಲಾ ಕಾರ್ಯಕ್ರಮ ಅಧಿಕಾರಿ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕಕ್ಕೆ ಸಲ್ಲಿಸಲು ಸೂಚಿಸಲು ವರದಿ ಮಾಡುವ ಸ್ವರೂಪವನ್ನು ಈ ಪತ್ರಕ್ಕೆ ಅನುಬಂಧ-2 ರಲ್ಲಿ ಲಗತ್ತಿಸಲಾಗಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಅಡಕ: ಅನುಬಂಧ:1 & 2

**ಇವರಿಗೆ:**
1. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ

**ಪ್ರತಿಯನ್ನು:**
1. ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕರು, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ ಕಚೇರಿ-ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-ಸದರಿ ಆದೇಶವನ್ನು ಇಲಾಖಾ ವೆಬ್-ಸೈಟ್ ನಲ್ಲಿ ಪ್ರಕಟಿಸುವ ಸಂಬಂಧ ಅಗತ್ಯ ಕ್ರಮಕ್ಕಾಗಿ.
3. ಕಛೇರಿ ಪ್ರತಿ.

Circular